ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಮೈಸೂರು ಚಾಮರಾಜನಗರ ಜಿಲ್ಲೆಯಲ್ಲಿ ಭತ್ತ ಖರೀದಿ ಕೇಂದ್ರಗಳ ಸ್ಥಾಪನೆ

ಶ್ರೀ ಎಸ್ ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

262 (311) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಲ್ಲೆಲ್ಲಿ ಭತ್ತ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ; (ವಿವರ ಒದಗಿಸುವುದು) ಎಲ್ಲೆಲ್ಲಿ ಭತ್ತ ಖರೀದಿ ಕೇಂದ್ರಗಳನ್ನು ಸ್ಥಾಪಿಸಬೇಕೆಂದು ರೈತರಿಂದ ಬೇಡಿಕೆ ಬಂದಿದೆ; ಬೇಡಿಕೆ ಬಂದ ಕಡೆ ಭತ್ತ ಖರೀದಿ ಕೇಂದ್ರ ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಆ) ಭತ್ತ ಖರೀದಿಗೆ ನಿಗದಿಗೊಳಿಸಿರುವ ಬೆಂಬಲ ಬೆಲೆ ಮತ್ತು ಖರೀದಿಗೆ ವಿಧಿಸಿರುವ ಮಿತಿ ಎಷ್ಟು; ಇದುವರೆಗೆ ಎಷ್ಟು ಭತ್ತವನ್ನು ಖರೀದಿಸಲಾಗಿದೆ; ಎಲ್ಲಿಯವರೆಗೆ ಈ ಭತ್ತ ಖರೀದಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ;

(ಇ) ಭತ್ತ ಖರೀದಿ ಕೇಂದ್ರಗಳ ಮೂಲಕ ಭತ್ತ ಖರೀದಿಗೆ ವಿಧಿಸಿರುವ ಪ್ರಕ್ರಿಯೆಗಳನ್ನು ಸರಳೀಕರಣ ಗೊಳಿಸಲಾಗುವುದೇ ?